क.रा.बी.नि.
ESIC

ಕಾರ್ಮಿಕರ ರಾಜ್ಯ ವಿಮಾ ನಿಗಮ
(ಕಾರ್ಮಿಕ ಮತ್ತು ಉದ್ಯೋಗ ಸಚಿವಾಲಯ, ಭಾರತ ಸರ್ಕಾರ)
कर्मचारी राज्य बीमा निगम
(श्रम एवं रोजगार मंत्रालय, भारत सरकार)
EMPLOYEES' STATE INSURANCE CORPORATION
(Ministry of Labour & Employment, Govt of India)

सत्यमेव जयते
Goverment Of India

ಉಪ ಪ್ರಾದೇಶಿಕ ಕಚೇರಿ, 1ನೇ ಮಹಡಿ, ಇಎಸ್ಐ ಡಿಸ್ಪೆನ್ಸರಿ ಬಿಲ್ಡಿಂಗ್, ಬಡೆಮಖಾನ್ ಎಕ್ಸಟೆನ್ಶನ್, ಎನ್.ಆರ್. ಮೊಹಲ್ಲಾ, ಮೈಸೂರು-570007.
उप क्षेत्रीय कार्यालय, पहला मंजिल, ईएसआई डिस्पेंसरी भवन, बड़ेमाखन एक्सटेंशन एन.आर. मोहल्ला बैंगलोर-मैसूर रोड, , मैसूर-570007.
SUB REGIONAL OFFICE, 1ST FLOOR, ESI DISPENSARY BUILDING, BADEMAKHAN EXTENSION, N.R. MOHALLA MYSURU-570007
Phone – 0821-2490180, E-Mail – dir-mysore@esic.nic.in
Website: www.esic.nic.in / www.esic.in

## ಪ್ರಕಟಣೆ

ಕಾರ್ಮಿಕರ ರಾಜ್ಯ ವಿಮಾ ನಿಗಮವು (ಇಎಸ್ಐಸಿ) SPREE 2025 (Scheme for promotion of Registration of employers and employees – ಉದ್ಯೋಗದಾತರು ಮತ್ತು ಉದ್ಯೋಗಿಗಳ ನೋಂದಣಿಯನ್ನು ಉತ್ತೇಜಿಸುವ ಯೋಜನೆ – 2025) ಎಂಬ ನವೀಕೃತ ಯೋಜನೆಯನ್ನು ಮಾನ್ಯ ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಹಾಗೂ ಯುವಜನ ಮತ್ತು ಕ್ರೀಡಾ ಸಚಿವರಾದ ಡಾ. ಮನ್ಸುಖ್ ಮಾಂಡವೀಯ ರವರ ಅಧ್ಯಕ್ಷತೆಯಲ್ಲಿ ಹಿಮಾಚಲ ಪ್ರದೇಶದ ಶಿಮ್ಲಾದಲ್ಲಿ ನಡೆದ ಕಾರ್ಮಿಕರ ರಾಜ್ಯ ವಿಮಾ ನಿಗಮದ 196 ನೇ ಸಭೆಯಲ್ಲಿ ಅನುಮೋದಿಸಿದೆ.

### SPREE 2025

ಉದ್ಯೋಗದಾತರು ಮತ್ತು ಉದ್ಯೋಗಿಗಳ ನೋಂದಣಿಯನ್ನು ಉತ್ತೇಜಿಸುವ ಯೋಜನೆ (SPREE) 2025 ಕಾರ್ಮಿಕರ ರಾಜ್ಯ ವಿಮಾ ನಿಗಮವು ಸಾಮಾಜಿಕ ಭದ್ರತಾ ವ್ಯಾಪ್ತಿಯನ್ನು ವಿಸ್ತರಿಸಲು ಅನುಮೋದಿಸಿದ ಒಂದು ವಿಶೇಷ ಉಪಕ್ರಮವಾಗಿದ್ದು, ದಿನಾಂಕ 1ನೇ ಜುಲೈ ರಿಂದ 31ನೇ ಡಿಸೆಂಬರ್ 2025 ರವರೆಗೆ ಸಕ್ರಿಯವಾಗಿದ್ದು, ಗುತ್ತಿಗೆ ಹಾಗೂ ತಾತ್ಕಾಲಿಕ ಕಾರ್ಮಿಕರು ಸೇರಿದಂತೆ ಇಎಸ್ಇ ಅಡಿಯಲ್ಲಿ ಇನ್ನೂ ನೋಂದಾವಣಿಯಾಗದ ಉದ್ಯೋಗದಾತರು ಮತ್ತು ಉದ್ಯೋಗಿಗಳು ಯಾವುದೇ ಪರಿಶೀಲನೆ ಅಥವಾ ಹಿಂದಿನ ಅವಧಿಯ ಯಾವುದೇ ಬಾಕಿಯ ಬೇಡಿಕೆ ಇಲ್ಲದೇ ನೋಂದಾಯಿಸಿಕೊಳ್ಳಲು ಒಂದು ಬಾರಿಯ ಅವಕಾಶವನ್ನು ಒದಗಿಸುತ್ತದೆ.

### SPREE 2025 ರ ಅಡಿಯಲ್ಲಿ:

- ಉದ್ಯೋಗದಾತರು ತಮ್ಮ ಘಟಕಗಳು ಮತ್ತು ಉದ್ಯೋಗಿಗಳನ್ನು ಇಎಸ್ಐಸಿ ಪೋರ್ಟಲ್, ಶ್ರಮ್ ಸುವಿಧಾ ಮತ್ತು ಎಂಸಿಎ (ESIC Portal, Shram suvidhaa, MCA) ಪೋರ್ಟಲ್ ಮೂಲಕ ಡಿಜಿಟಲ್ ರೂಪದಲ್ಲಿ ನೋಂದಾಯಿಸಿಕೊಳ್ಳಬಹುದು.
- ಉದ್ಯೋಗದಾತರು ತಾವು ಘೋಷಿಸಿದ ದಿನಾಂಕದಿಂದ ನೋಂದಣಿಯನ್ನು ಪರಿಗಣಿಸಲಾಗುತ್ತದೆ.
- ನೋಂದಣಿಯ ಪೂರ್ವ ಅವಧಿಗೆ ಯಾವುದೇ ವಂತಿಗೆ ಮತ್ತು ಸೌಲಭ್ಯವನ್ನು ಅನ್ವಯಿಸುವುದಿಲ್ಲ.
- ನೋಂದಣಿಯ ಪೂರ್ವ ಅವಧಿಯ ಯಾವುದೇ ದಾಖಲೆಗಳ ಪರಿಶೀಲನೆ ಅಥವಾ ಬೇಡಿಕೆ ಇರುವುದಿಲ್ಲ.

ಈ ಯೋಜನೆಯು ಸ್ವಯಂಪ್ರೇರಿತವಾದ ಅನುಸರಣೆಯನ್ನು ಪ್ರೋತ್ಸಾಹಿಸಿ, ಹಿಂದಿನ ಅವಧಿಗೆ ದಂಡ ಪಾವತಿಸಬೇಕಾದ ಭಯವನ್ನು ಹೋಗಲಾಡಿಸಿ, ನೋಂದಾವಣಿಯ ಪ್ರಕ್ರಿಯೆಯನ್ನು ಸರಳೀಕರಿಸಲಾಗಿದೆ. SPREE 2025 ನ್ನು ಅನುಮೋದಿಸುವ ಮೊದಲು ನಿಗದಿತ ಅವಧಿಯಲ್ಲಿ ನೋಂದಾವಣಿ ಮಾಡದಿದ್ದಲ್ಲಿ ಕಾನೂನು ಕ್ರಮ ಹಾಗೂ ಹಿಂದಿನ ಅವಧಿಯ ಬಾಕಿ ಬೇಡಿಕೆಗೆ ಕಾರಣವಾಗುತ್ತಿತ್ತು. SPREE 2025 ಈ ಅಡೆತಡೆಗಳನ್ನು ನಿವಾರಿಸಿ ನೋಂದಾವಣಿಯಿಂದ ಬಿಟ್ಟುಹೋದ ಘಟಕಗಳು ಮತ್ತು ಕಾರ್ಮಿಕರನ್ನು ಇಎಸ್ಐ ವ್ಯಾಪ್ತಿಯೊಳಗೆ ಸೇರಿಸಿ ಸಾಮಾಜಿಕ ಭದ್ರತೆಯನ್ನು ಖಚಿತಪಡಿಸುತ್ತದೆ.

SPREE 2025 ರ ಪ್ರಾರಂಭವು ಕಾರ್ಮಿಕರ ರಾಜ್ಯ ವಿಮಾ ನಿಗಮದ ಒಂದು ಪ್ರಗತಿಪರ ಹೆಜ್ಜೆಯಾಗಿದ್ದು, ಸರಳ ಮತ್ತು ಹಿಂದಿನ ಅವಧಿಯ ಬಾಕಿಯ ಬೇಡಿಕೆಯಿಲ್ಲದೆ ನೋಂದಾವಣಿಯಾಗಿ ಸುಲಭವಾಗಿ ಸಾಮಾಜಿಕ ಭದ್ರತೆಗೆ ಒಳಪಡುವ ಯೋಜನೆಯಾಗಿದೆ. ಈ ಯೋಜನೆಯು ಉದ್ಯೋಗದಾತರು ಕೇವಲ ತಮ್ಮ ಕಾರ್ಯಪಡೆಯ ಕ್ರಮಬದ್ಧಗೊಳಿಸುವಿಕೆಯನ್ನು ಪ್ರೋತ್ಸಾಹಿಸುವುದಲ್ಲದೆ, ಇನ್ನೂ ಹೆಚ್ಚಿನ ಕಾರ್ಮಿಕರನ್ನು ವಿಶೇಷವಾಗಿ ಗುತ್ತಿಗೆ ವಲಯದ ಕಾರ್ಮಿಕರು ಇಎಸ್ಐ ಕಾಯ್ದೆಯಡಿಯಲ್ಲಿ ದೊರೆಯುವ ಅಗತ್ಯ ಆರೋಗ್ಯ ರಕ್ಷಣೆ ಹಾಗೂ ಸಾಮಾಜಿಕ ಸೌಲಭ್ಯಗಳನ್ನು ಪಡೆಯುವುದನ್ನು ಉತ್ತೇಜಿಸುತ್ತದೆ. ಇದರೊಂದಿಗೆ ಇಎಸ್ಐಸಿಯು ಅಗತ್ಯ ಆರೋಗ್ಯ ರಕ್ಷಣೆ ಮತ್ತು ಸಾಮಾಜಿಕ ಭದ್ರತೆಯನ್ನು ತಲುಪಿಸುವ ತನ್ನ ಬದ್ಧತೆಯನ್ನು ಉಳಿಸಿಕೊಂಡು ಭಾರತದ ಕಾರ್ಮಿಕ ಕಲ್ಯಾಣ ಕೇಂದ್ರಿತ ದೃಷ್ಟಿಕೋನಕ್ಕೆ ಅನುಗುಣವಾಗಿದೆ.